ಮದ್ದೂರು ಪಟ್ಟಣಕ್ಕೆ ಕುಡಿಯುವ ನೀರಿನ ಪೂರೈಕೆಗೆ ಸಮರ್ಪಕ ವಿದ್ಯುತ್

175 (493) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು):– ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮದ್ದೂರು ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಏಕಕಾಲದಲ್ಲಿ ಮೂರು ಕಡೆ ವಿದ್ಯುತ್ ಅವಶ್ಯಕವಾಗಿದ್ದು, ಸಮರ್ಪಕವಾಗಿ ವಿದ್ಯುತ್ ಪೂರೈಕೆಯಾಗದಿರುವುದರಿಂದ ಮದ್ದೂರು ಪಟ್ಟಣದ ಜನರಿಗೆ ಕುಡಿಯುವ ನೀರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಮದ್ದೂರು ಪಟ್ಟಣಕ್ಕೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಮಾಡಲು ಅವಶ್ಯಕವಾಗಿರುವ ಎಕ್ಸ್‌ಪ್ರೆಸ್ ಫೀಡರ್ ಲೈನ್‌ಗಳನ್ನು ಅಳವಡಿಸುವುದಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೆ;

ಇ) ಹಾಗಿದ್ದಲ್ಲಿ, ಎಕ್ಸ್‌ಪ್ರೆಸ್ ಫೀಡರ್ ಲೈನ್‌ಗಳನ್ನು ಯಾವಾಗ ಅಳವಡಿಸಲಾಗುವುದು?

ಶೋಭಾ ಕರಂದ್ಲಾಜೆ (ಇಂಧನ ಸಚಿವರು):–

ಅ), ಆ) ಮತ್ತು ಇ) ಮದ್ದೂರು ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ವ್ಯವಸ್ಥೆಯು ಸ್ಥಳೀಯ ಟೌನ್ ಮುನಿಸಿಪಾಲಿಟಿಗೆ ಸಂಬಂಧಪಟ್ಟ ವಿಷಯವಾಗಿರುತ್ತದೆ. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರು ಎಕ್ಸ್‌ಪ್ರೆಸ್ ಫೀಡರ್ ಕೋರಿ ಅವರ ಅಗತ್ಯತೆಯ ಬಗ್ಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತವನ್ನು ಸಂಪರ್ಕಿಸಿದಲ್ಲಿ ಅಗತ್ಯವಿರುವ ಸೌಕರ್ಯಗಳನ್ನು ಆದ್ಯತೆ ಮೇಲೆ ನಿಯಮಾನುಸಾರ ಒದಗಿಸಲಾಗುವುದು.

ಮದ್ದೂರು ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಿಂದ ಕೆಟ್ಟಿರುವ ಟ್ರಾನ್ಸ್‌ಫಾರ್ಮರ್‌ಗಳು

176 (494) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು):– ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮದ್ದೂರು ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೆಟ್ಟು ಹೋದ